## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** 2021-22ನೇ ಸಾಲಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾವಲಯ ಲೆಕ್ಕಶೀರ್ಷಿಕೆ:2225-00-103-0-26 ರಡಿಯಲ್ಲಿ ವಿದ್ಯಾರ್ಥಿ ನಿಲಯಗಳ ನಿರ್ವಹಣೆಗೆ ಒದಗಿಸಿರುವ ಅನುದಾನವನ್ನು ವಿದ್ಯಾರ್ಥಿ ನಿಲಯಗಳ ಮೂಲಭೂತ ಸೌಕರ್ಯಗಳಿಗೆ ಬಳಸಿಕೊಳ್ಳುವ ಬಗ್ಗೆ.

**ಓದಲಾಗಿದೆ:-** ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಪ್ರಸ್ತಾವನೆ ಸಂಖ್ಯೆ: ಹಿಂವಕಇ/ವನಿಶಾ/2-ಸಿಆರ್-4/2021-22, ದಿನಾಂಕ:09.06.2021.

******

**ಪ್ರಸ್ತಾವನೆ:-**

ಮೇಲೆ ಓದಲಾದ ಪ್ರಸ್ತಾವನೆಯಲ್ಲಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವ್ಯಾಪ್ತಿಯಡಿ 1301 ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳು, 1137 ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳು ಹಾಗೂ 18 ಆಶ್ರಮ ಶಾಲೆಗಳು ಕಾರ್ಯನಿರ್ವಹಿಸುತ್ತಿದ್ದು, 193761 ವಿದ್ಯಾರ್ಥಿಗಳಿಗೆ ಪ್ರವೇಶ ಕಲ್ಪಿಸಲು ಅವಕಾಶವಿದ್ದು, 2020-21ನೇ ಸಾಲಿನಲ್ಲಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳಲ್ಲಿ 50438, ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಲ್ಲಿ 170462, ಹಾಗೂ ಆಶ್ರಮ ಶಾಲೆಗಳಲ್ಲಿ 672 ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶವನ್ನು ಕಲ್ಪಿಸಲಾಗಿರುತ್ತದೆ ಎಂದು ತಿಳಿಸಿರುತ್ತಾರೆ. 2021-22ನೇ ಸಾಲಿನ ಆಯವ್ಯಯದಲ್ಲಿ ವಿದ್ಯಾರ್ಥಿ ನಿಲಯಗಳ ನಿರ್ವಹಣೆಗೆ ಜಿಲ್ಲಾ ವಲಯ ಲೆಕ್ಕಶೀರ್ಷಿಕೆ:2225-00-103-0-26 ರಡಿ ರೂ. 743.80 ಕೋಟಿಗಳನ್ನು (ರೂ.112.67 ಕೋಟಿಗಳ LUMPSUM ಮೊತ್ತ ಒಳಗೊಂಡಂತೆ) ಒದಗಿಸಲಾಗಿದ್ದು, ಕೋವಿಡ್-19 ಪ್ರಯುಕ್ತ ವಿದ್ಯಾರ್ಥಿ ನಿಲಯಗಳು ಕೆಲವು ತಿಂಗಳುಗಳಿಂದ ಕಾರ್ಯನಿರ್ವಹಿಸದಿರುವುದರಿಂದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿನಿಲಯಗಳಲ್ಲಿ ದಾಖಲಾಗಿರುವ ವಿದ್ಯಾರ್ಥಿಗಳಿಗೆ ಆಹಾರ ವೆಚ್ಚದ ದರದಂತೆ ನೇರ ನಗದು ವರ್ಗಾವಣೆ ಅಡಿಯಲ್ಲಿ ಅವರವರ ಬ್ಯಾಂಕ್ ಖಾತೆಗೆ ಜಮಾ ಮಾಡಲು ಪ್ರಸ್ತಾಪಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಗೆ ಸಲ್ಲಿಸಲಾಗಿ, ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ:ಆಇ/276/ವೆಚ್ಚ-3/2021,ದಿನಾಂಕ:29.06.2021 ರಲ್ಲಿ "ವಿದ್ಯಾರ್ಥಿ ನಿಲಯಗಳ ನಿರ್ವಹಣೆಗಾಗಿ ಆಯವ್ಯಯದಲ್ಲಿ ಅನುದಾನ ಒದಗಿಸಿದ್ದು, ಈ ಮೊತ್ತವನ್ನು ವಿದ್ಯಾರ್ಥಿಗಳಿಗೆ ನೀಡಲೇ ಬೇಕಾದ ಸವಲತ್ತುಗಳೆಂದು (entitlement) ಪರಿಗಣಿಸುವುದು ಸಮಂಜಸವಲ್ಲ. ಒಂದು ವೇಳೆ ವಿದ್ಯಾರ್ಥಿ ನಿಲಯಗಳು ಪ್ರಸಕ್ತ ಸಾಲಿನಲ್ಲಿ ಕಾರ್ಯನಿರ್ವಹಿಸಲು ಸಾಧ್ಯವಾಗದಿದ್ದಲ್ಲಿ, ಸದರಿ ಅನುದಾನವನ್ನು ಉಳಿತಾಯವೆಂದು ಪರಿಗಣಿಸಿ, ಆದ್ಯತೆಗನುಸಾರವಾಗಿ ಅವಶ್ಯವಿರುವ ಉದ್ದೇಶಗಳಿಗೆ ವೆಚ್ಚ ಮಾಡಬೇಕಾಗುತ್ತದೆ. ಆದ್ದರಿಂದ ಪ್ರಸ್ತಾವನೆಯನ್ನು ಒಪ್ಪಲು ಸಾಧ್ಯವಿಲ್ಲ" ಎಂದು ಅಭಿಪ್ರಾಯ ನೀಡಿರುತ್ತದೆ.

ಮುಂದುವರೆದು, ಕೋವಿಡ್-19 ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ ಕೆಲವು ತಿಂಗಳುಗಳು ವಿದ್ಯಾರ್ಥಿನಿಲಯಗಳು ಮುಚ್ಚಿರುವುದರಿಂದ ವಿದ್ಯಾರ್ಥಿ ನಿಲಯಗಳ ನಿರ್ವಹಣೆಗೆ ಒದಗಿಸಿದ ಅನುದಾನ ಉಳಿತಾಯವಾಗಲಿದ್ದು, ಈ ಅನುದಾನವನ್ನು ವಿದ್ಯಾರ್ಥಿ ನಿಲಯಗಳ

ಮೂಲಭೂತ ಸೌಕರ್ಯ ಕಲ್ಪಿಸಲು ಬಳಸಿಕೊಳ್ಳಲು ಆರ್ಥಿಕ ಇಲಾಖೆಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿತ್ತು. ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ; ಆಇ/276/ವೆಚ್ಚ-3/2021, ದಿನಾಂಕ:08.02.2022 ರಲ್ಲಿ "ಆಡಳಿತ ಇಲಾಖೆಯ ಪ್ರಸ್ತಾವನೆಗೆ ಆರ್ಥಿಕ ಇಲಾಖೆಯು ಸಹಮತಿಸಿದೆ" ಎಂದು ತಿಳಿಸಿರುತ್ತದೆ.

ಅದರಂತೆ ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 01 ಬಿಎಂಎಸ್ 2021,**
**ಬೆಂಗಳೂರು, ದಿನಾಂಕ: 09.02.2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಕೋವಿಡ್-19 ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ ಶಾಲಾ-ಕಾಲೇಜುಗಳು ಕೆಲವು ತಿಂಗಳುಗಳು ನಡೆಯದಿದ್ದುದರಿಂದ, ವಿದ್ಯಾರ್ಥಿನಿಲಯಗಳು ಸಹ ಕಾರ್ಯನಿರ್ವಹಿಸಿರುವುದಿಲ್ಲ. ಜಿಲ್ಲಾ ವಲಯ ಲೆಕ್ಕಶೀರ್ಷಿಕೆ 2225-00-103-02-26 ರಲ್ಲಿ ಉಂಟಾಗಿರುವ ಉಳಿತಾಯದ ಅನುದಾನದ ಬಗ್ಗೆ ಸಂಬಂಧಪಟ್ಟ ಜಿಲ್ಲೆಯ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ ರವರು ವಿವರವಾಗಿ ಪರಿಶೀಲಿಸಿ ಸಂಪೂರ್ಣ ಮಾಹಿತಿ ಪಡೆದು ಈ ಕೆಳಕಂಡ ಆದ್ಯತೆ ಪಟ್ಟಿಯನುಸಾರ ವಿದ್ಯಾರ್ಥಿನಿಲಯಗಳಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಪಾರದರ್ಶಕವಾಗಿ ಜಿಲ್ಲಾ ಪಂಚಾಯತಿಯ ಸಕ್ಷಮ ಸಭೆಯಲ್ಲಿ ಮಂಡಿಸಿ ಪರಿಶೀಲಿಸಿ ಅನುಮತಿಯನ್ನು ಪಡೆದು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮವನ್ನು ಪಾಲಿಸಿ ನಿಯಮಾನುಸಾರ ಬಳಕೆಗಾಗಿ ಈ ಕೆಳಕಂಡ ಷರತ್ತು ಹಾಗೂ ಆದ್ಯತೆಯನುಸಾರ ಬಳಸಿಕೊಳ್ಳಲು ಆದೇಶಿಸಿದೆ.

**ಆದ್ಯತೆಪಟ್ಟಿ(a).** ಈಗಾಗಲೇ ಬಾಡಿಗೆ ಕಟ್ಟಡದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಹಾಗೂ ಕಳೆದ ಎರಡು ವರ್ಷಗಳಿಂದ ಸತತವಾಗಿ 75% ಕ್ಕಿಂತ ಹೆಚ್ಚು ದಾಖಲಾತಿ ಹೊಂದಿರುವ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ಸ್ವಂತ ಕಟ್ಟಡದ ನಿರ್ಮಾಣಕ್ಕೆ ಬಳಸಿಕೊಳ್ಳುವುದು.

ಆದ್ಯತೆ ಪಟ್ಟಿ (a) ರಂತೆ ವಿದ್ಯಾರ್ಥಿ ನಿಲಯ ಲಭ್ಯವಿಲ್ಲದಿದ್ದಲ್ಲಿ, ತದನಂತರವೇ (b) ಯನ್ನು ಪರಿಗಣಿಸುವುದು.

**ಆದ್ಯತೆಪಟ್ಟಿ (b).** ಸ್ವಂತ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮತ್ತು ಸಾಕಷ್ಟು ಸ್ಥಳಾವಕಾಶವಿರುವ ಹಾಗೂ ಕಳೆದ ಎರಡು ವರ್ಷಗಳಲ್ಲಿ ಸತತವಾಗಿ 75% ಕ್ಕಿಂತ ಹೆಚ್ಚು ವಿದ್ಯಾರ್ಥಿಗಳನ್ನು ಹೊಂದಿರುವ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಲ್ಲಿ ಭೋಜನಶಾಲೆ ಅಥವಾ ಗ್ರಂಥಾಲಯ ಅಥವಾ ಕಂಪ್ಯೂಟರ್ ಹಾಲ್‌ನ ನಿರ್ಮಾಣಕ್ಕೆ ಬಳಸಿಕೊಳ್ಳುವುದು. ಅಗತ್ಯವಿದ್ದಲ್ಲಿ (ಮಹಾತ್ಮಗಾಂಧಿ ಉದ್ಯೋಗ ಖಾತ್ರಿ ಯೋಜನೆಯ ಅನುದಾನ ಲಭ್ಯವಿದ್ದಲ್ಲಿ ಅದರೊಂದಿಗೆ ನಿಯಮಾನುಸಾರ ಕ್ರೋಢೀಕರಿಸಿ ಬಳಸಿಕೊಳ್ಳುವುದು)